**All India Radio: Bangalore**
**National Bulletin In Kannada**
**06.07.2026 07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ಪ್ರಧಾನಿ ನರೇಂದ್ರಮೋದಿ ಇಂದಿನಿಂದ ಇಂಡೋನೇಷ್ಯಾ, ಆಸ್ಟ್ರೇಲಿಯಾ, ನ್ಯೂಜಿಲೆಂಡ್‌ಗೆ ಆರು ದಿನಗಳ ಭೇಟಿ; ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ
2. ಭಾರತದ ಅಧ್ಯಕ್ಷತೆಯಲ್ಲಿ ಎರಡು ದಿನಗಳ ಬ್ರಿಕ್ಸ್ ಮಹಿಳಾ ಕಾರ್ಯಪಡೆ ಸಭೆ ಕೊಚ್ಚಿಯಲ್ಲಿ ಇಂದಿನಿಂದ ಆರಂಭ
3. ಮುಂಬೈನಲ್ಲಿ ಮುಂದುವರಿದ ಮಳೆ ಅಬ್ಬರ; ಕಟ್ಟಡ ಕುಸಿದು ಕನಿಷ್ಠ ಆರು ಜನರು ಸಾವು
4. ಐಸಿಸಿ ಮಹಿಳಾ ಟಿ-೨೦ ಕ್ರಿಕೆಟ್: ದಾಖಲೆಯ ಏಳನೇ ಬಾರಿಗೆ ವಿಶ್ವಕಪ್ ಕಿರೀಟ ಮುಡಿಗೇರಿಸಿಕೊಂಡ ಆಸ್ಟ್ರೇಲಿಯಾ

<><><><>

ಪ್ರಧಾನಿ ನರೇಂದ್ರ ಮೋದಿ ಇಂದಿನಿಂದ ಇಂಡೋನೇಷ್ಯಾ, ಆಸ್ಟ್ರೇಲಿಯಾ ಮತ್ತು ನ್ಯೂಜಿಲೆಂಡ್‌ಗೆ ಆರು ದಿನಗಳ ಭೇಟಿ ನೀಡಲಿದ್ದಾರೆ. ಮೂರು ರಾಷ್ಟ್ರಗಳ ಪ್ರವಾಸದ ಮೊದಲ ಚರಣದಲ್ಲಿ ಪ್ರಧಾನಿ ಅವರು ಇಂದು ಇಂಡೋನೇಷ್ಯಾಗೆ ಭೇಟಿ ನೀಡಲಿದ್ದಾರೆ. ಗುರುದೇವ್ ರಬೀಂದ್ರನಾಥ ಟ್ಯಾಗೋರರ ಭೇಟಿಯ ಶತಮಾನೋತ್ಸವದ ಅಂಗವಾಗಿ ೧೫ ತಿಂಗಳ ಕಾರ್ಯಕ್ರಮವನ್ನು ಈ ಸಂದರ್ಭದಲ್ಲಿ ಇಂಡೋನೇಷ್ಯಾ ಆಚರಿಸಲಿದೆ. ಈ ಕುರಿತು ಮಾಹಿತಿ ನೀಡಿದ ಇಂಡೋನೇಷ್ಯಾದಲ್ಲಿನ ಭಾರತದ ರಾಯಭಾರಿ ಸಂದೀಪ್ ಚಕ್ರವರ್ತಿ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಭೇಟಿಯ ವೇಳೆ ಈ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗುವುದು. ಉಭಯ ದೇಶಗಳ ನಡುವಿನ ಸಾಂಸ್ಕೃತಿಕ ಬಾಂಧವ್ಯವನ್ನು ಗಟ್ಟಿಗೊಳಿಸುವ ಪ್ರದರ್ಶನಗಳು ಮತ್ತು ಸಾಂಸ್ಕೃತಿ ಕಾರ್ಯಕ್ರಮಗಳನ್ನು ವರ್ಷವಿಡೀ ಹಮ್ಮಿಕೊಳ್ಳಲಾಗುವುದು. ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ಇಂಡೋನೇಷ್ಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ ಅವರೊಂದಿಗೆ ದ್ವಿಪಕ್ಷೀಯ ಚರ್ಚೆ ನಡೆಸಲಿದ್ದು, ಉಭಯ ದೇಶಗಳ ನಡುವೆ ಪಾಲುದಾರಿಕೆಯಲ್ಲಿ ಆಗಿರುವ ಪ್ರಗತಿಯನ್ನು ಪರಿಶೀಲಿಸಲಿದ್ದಾರೆ.

<><><><>

ಭಾರತದ ಅಧ್ಯಕ್ಷತೆಯಲ್ಲಿ ಎರಡು ದಿನಗಳ ಬ್ರಿಕ್ಸ್ ಮಹಿಳಾ ಕಾರ್ಯಪಡೆ ಸಭೆ ಕೇರಳಂನ ಕೊಚ್ಚಿಯಲ್ಲಿ ಇಂದಿನಿಂದ ಆರಂಭವಾಗಲಿದೆ. ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಹಿರಿಯ ಸರ್ಕಾರಿ ಅಧಿಕಾರಿಗಳು ಒಟ್ಟಾಗಿ ಸೇರಿ ಎಲ್ಲಾ ವಲಯಗಳಲ್ಲಿ ಮಹಿಳಾ ಸಬಲೀಕರಣ ಮತ್ತು ಮಹಿಳಾ ನೇತೃತ್ವದ ಅಭಿವೃದ್ಧಿಗೆ ಸಂಬಂಧಿಸಿದ ಪ್ರಮುಖ ವಿಷಯಗಳ ಕುರಿತು ಚರ್ಚಿಸಲಿದ್ದಾರೆ ಎಂದು ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ ತಿಳಿಸಿದೆ. ಮಹಿಳಾ ಕಾರ್ಯಪಡೆ ಸಭೆಯು ಸದಸ್ಯ ರಾಷ್ಟ್ರಗಳಿಗೆ ಮಹಿಳಾ ನೇತೃತ್ವದ ಅಭಿವೃದ್ಧಿಯನ್ನು ಮುನ್ನಡೆಸುವ ನಿಟ್ಟಿನಲ್ಲಿ ಒಮ್ಮತವನ್ನು ಮೂಡಿಸಲು ಅವಕಾಶ ಒದಗಿಸುತ್ತದೆ.

<><><><>

ಬ್ರಿಕ್ಸ್ ರಾಷ್ಟ್ರಗಳ ಮಾದಕವಸ್ತು ನಿಯಂತ್ರಣ ಸಂಸ್ಥೆಗಳ ಮುಖ್ಯಸ್ಥರ ಎರಡು ದಿನಗಳ ಸಭೆಯು ಇಂದಿನಿಂದ ಅಸ್ಸಾಂನ ಗುವಾಹಟಿಯಲ್ಲಿ ಆರಂಭವಾಗಲಿದೆ. ಈ ಸಭೆಗೆ ಭಾರತ ಆತಿಥ್ಯ ವಹಿಸಲಿದೆ. ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಮಾದಕವಸ್ತು ನಿಯಂತ್ರಣ ಸಂಸ್ಥೆಗಳ ಮುಖ್ಯಸ್ಥರು ಹಾಗೂ ಹಿರಿಯ ಅಧಿಕಾರಿಗಳು ಈ ಸಭೆಯಲ್ಲಿ ಭಾಗವಹಿಸಲಿದ್ದು, ಸಂಸ್ಥೆಗಳ ನಡುವಿನ ನಿರಂತರ ಸಹಕಾರವನ್ನು ಬಲಪಡಿಸುವುದು ಮತ್ತು ಕಾರ್ಯಾಚರಣಾ ಮಟ್ಟದಲ್ಲಿ ಇನ್ನಷ್ಟು ಸಮನ್ವಯ ಸಾಧಿಸುವುದು ಇದರ ಪ್ರಮುಖ ಉದ್ದೇಶವಾಗಿದೆ ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ. ಕಾರ್ಯಾಚರಣಾ ಸಮನ್ವಯ ಬಲಪಡಿಸುವಿಕೆ, ಗುಪ್ತಚರ ಮಾಹಿತಿ ವಿನಿಮಯ, ಸಾಮರ್ಥ್ಯ ಅಭಿವೃದ್ಧಿ ಹಾಗೂ ಮಾದಕವಸ್ತುಗಳಿಗೆ ಸಂಬಂಧಿಸಿದ ಹೊಸ ಸವಾಲುಗಳನ್ನು ಎದುರಿಸಲು ಜಂಟಿ ಕಾರ್ಯತಂತ್ರ ರೂಪಿಸುವ ಕುರಿತು ಚರ್ಚೆ ನಿರೀಕ್ಷಿಸಲಾಗಿದೆ.

<><><><>

ಕೇಂದ್ರ ಸಹಕಾರ ಸಚಿವ ಅಮಿತ್ ಶಾ ಇಂದು ನವದೆಹಲಿಯಲ್ಲಿ ನಡೆಯಲಿರುವ ಕೇಂದ್ರ ಸಹಕಾರ ಸಚಿವಾಲಯದ ೫ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. 'ಸಹಕಾರದಿಂದ ಸಮೃದ್ಧಿ' ಪರಿಕಲ್ಪನೆಗೆ ಅನುಗುಣವಾಗಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ಈ ಸಂದರ್ಭದಲ್ಲಿ ಅಮಿತ್ ಶಾ ಅವರು ೨೩೨ ಧಾನ್ಯ ಸಂಗ್ರಹ ಗೋದಾಮುಗಳ ಉದ್ಘಾಟನೆ, 'ಸಹಕಾರ ವನ'ಕ್ಕೆ ಭೂಮಿಪೂಜೆ ಸೇರಿದಂತೆ ಹಲವು ಮಹತ್ವದ ಯೋಜನೆಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಲಿದ್ದಾರೆ.

<><><>

ಸ್ವಿಟ್ಜರ್‌ಲ್ಯಾಂಡ್‌ನ ಜಿನಿವಾದಲ್ಲಿ ಇಂದಿನಿಂದ ಮೂರು ದಿನ ನಡೆಯಲಿರುವ ಗ್ರಾಹಕರ ಸಂರಕ್ಷಣಾ ಕಾನೂನು ಮತ್ತು ನೀತಿ ಕುರಿತ ತಜ್ಞರ ಅಂತರಸರ್ಕಾರಿ ಗುಂಪಿನ ಒಂಭತ್ತನೇ ಸಭೆಯ ಅಧ್ಯಕ್ಷತೆಯನ್ನು ಭಾರತ ವಹಿಸಲಿದೆ. ಈ ಸಭೆಯಲ್ಲಿ ವಿಶ್ವಸಂಸ್ಥೆಯ ಸದಸ್ಯ ರಾಷ್ಟ್ರಗಳು, ಅಂತರರಾಷ್ಟ್ರೀಯ ಸಂಸ್ಥೆಗಳು, ಗ್ರಾಹಕರ ಸಂರಕ್ಷಣಾ ಪ್ರಾಧಿಕಾರಗಳು, ಶಿಕ್ಷಣ ತಜ್ಞರು ಸೇರಿದಂತೆ ಸಂಬಂಧಿತರು ಭಾಗವಹಿಸಿ, ಗ್ರಾಹಕರ ಸಂರಕ್ಷಣಾ ಕಾನೂನು ಮತ್ತು ನೀತಿಗೆ ಸಂಬಂಧಿಸಿದ ವಿಷಯಗಳ ಕುರಿತು ಚರ್ಚಿಸಲಿದ್ದಾರೆ. ಗ್ರಾಹಕರ ಸಂರಕ್ಷಣಾ ಕಾನೂನು ಮತ್ತು ನೀತಿ ಕುರಿತ ಸಹಕಾರ ಹಾಗೂ ಸಂವಾದಕ್ಕೆ ಈ ಅಂತರಸರ್ಕಾರಿ ತಜ್ಞರ ಗುಂಪು ಪ್ರಮುಖ ವೇದಿಕೆಯಾಗಿದೆ. ಗ್ರಾಹಕ ವ್ಯವಹಾರಗಳ ಇಲಾಖೆಯ ಕಾರ್ಯದರ್ಶಿ ನಿಧಿ ಖರೆ ಈ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಗ್ರಾಹಕರಿಗೆ ಮಾಹಿತಿ ಮತ್ತು ಜಾಗೃತಿ, ಸುಸ್ಥಿರ ಬಳಕೆ, ಜಾಗತಿಕ ಮಾರುಕಟ್ಟೆಗಳಲ್ಲಿ ಗ್ರಾಹಕರ ಸಂರಕ್ಷಣಾ ಕಾನೂನುಗಳ ಅನುಷ್ಠಾನ ಸೇರಿದಂತೆ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಯಲಿದೆ.

<><><>

ಭಾರತಕ್ಕೆ ರಸಗೊಬ್ಬರಗಳು ಮತ್ತು ರಸಗೊಬ್ಬರ ಕಚ್ಚಾ ವಸ್ತುಗಳನ್ನು ಸಾಗಿಸುತ್ತಿದ್ದ ಒಟ್ಟು ೧೫ ಹಡಗುಗಳು ಹಾರ್ಮುಜ್ ಜಲಸಂಧಿಯನ್ನು ಸುರಕ್ಷಿತವಾಗಿ ದಾಟಿವೆ ಎಂದು ರಾಸಾಯನಿಕ ಮತ್ತು ರಸಗೊಬ್ಬರ ಸಚಿವಾಲಯ ತಿಳಿಸಿದೆ. ೧೫ ಹಡಗುಗಳಲ್ಲಿ, ೩.೩೨ ಲಕ್ಷ ಮೆಟ್ರಿಕ್ ಟನ್ ಯೂರಿಯಾವನ್ನು ಹೊತ್ತ ಎಂಟು ಹಡಗುಗಳು, ೨.೫೬ ಲಕ್ಷ ಮೆಟ್ರಿಕ್ ಟನ್ ಡೈಅಮೋನಿಯಂ ಫಾಸ್ಫೇಟ್ ಅನ್ನು ಹೊತ್ತ ನಾಲ್ಕು ಹಡಗುಗಳು ಮತ್ತು ೧.೧೧ ಲಕ್ಷ ಮೆಟ್ರಿಕ್ ಟನ್ ಸಲ್ಫರ್ ಅನ್ನು ಹೊತ್ತ ಮೂರು ಹಡಗುಗಳು ಭಾರತಕ್ಕೆ ಪ್ರಯಾಣ ಬೆಳೆಸುತ್ತಿವೆ. ಇನ್ನೂ ಐದು ಹಡಗುಗಳು ಭಾರತಕ್ಕೆ ಪ್ರಯಾಣ ಬೆಳೆಸಲಿವೆ ಎಂದು ಸಚಿವಾಲಯ ತಿಳಿಸಿದೆ. ಪಶ್ಚಿಮ ಏಷ್ಯಾ ಸಂಘರ್ಷದಿಂದಾಗಿ ರಸಗೊಬ್ಬರ ಘಟಕಗಳಿಗೆ ನೈಸರ್ಗಿಕ ಅನಿಲ ಪೂರೈಕೆಯಲ್ಲಿ ತಾತ್ಕಾಲಿಕ ಕುಸಿತ ಕಂಡುಬಂದಿದ್ದು, ಶೇಕಡ ೬೫ ರಷ್ಟು ಕುಸಿತದಿಂದ ಈಗ ಶೇಕಡ ೧೦೦ ರಷ್ಟು ಸಂಪೂರ್ಣವಾಗಿ ಪುನಃಸ್ಥಾಪನೆಯಾಗಿದೆ.

<><><>

ಮುಂಬೈನಲ್ಲಿ ನಿನ್ನೆ ರಾತ್ರಿ ಸುರಿದ ಭಾರೀ ಮಳೆಗೆ ಮನ್ಖುರ್ದ್ ಪ್ರದೇಶದಲ್ಲಿ ಮೂರು ಅಂತಸ್ತಿನ ಕಟ್ಟಡ ಕುಸಿದು ಕನಿಷ್ಠ ಆರು ಜನರು ಸಾವನ್ನಪ್ಪಿದ್ದು, ಒಬ್ಬರು ಗಾಯಗೊಂಡಿದ್ದಾರೆ. ಅವಶೇಷಗಳ ಅಡಿಯಲ್ಲಿ ಒಬ್ಬ ವ್ಯಕ್ತಿ ಸಿಲುಕಿರುವ ಶಂಕೆ ಇದ್ದು, ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯೆ ಪಡೆ- ಎನ್‌ಡಿಆರ್‌ಎಫ್ ಮತ್ತು ವಿವಿಧ ಸಂಸ್ಥೆಗಳ ಸಿಬ್ಬಂದಿ ಆತನನ್ನು ಪತ್ತೆ ಹಚ್ಚಲು ಕಾರ್ಯಾಚರಣೆ ನಡೆಸುತ್ತಿವೆ. ಗಾಯಗೊಂಡವರನ್ನು ರಾಜವಾಡಿಯ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

<><><>

ಅಯೋಧ್ಯೆಯ ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಇಂದು ತನ್ನ ಸದಸ್ಯರ ಸಭೆಯನ್ನು ಕರೆದಿದೆ. ಟ್ರಸ್ಟ್ ಸ್ವೀಕರಿಸಿದ ದೇಣಿಗೆಗಳ ಎಣಿಕೆಯನ್ನು ತನಿಖೆ ಮಾಡುತ್ತಿರುವ ವಿಶೇಷ ತನಿಖಾ ತಂಡ-ಎಸ್‌ಐಟಿ ತನಿಖೆಯಲ್ಲಿ ಹೊರಬಿದ್ದಿರುವ ಅಂಶಗಳು ಸೇರಿದಂತೆ ಹಲವಾರು ಪ್ರಮುಖ ಆಡಳಿತಾತ್ಮಕ ಮತ್ತು ಆರ್ಥಿಕ ವಿಷಯಗಳ ಕುರಿತು ಚರ್ಚಿಸಲು ಸಭೆ ಕರೆಯಲಾಗಿದೆ.

<><><>

ಪಾಕಿಸ್ತಾನ ಆಕ್ರಮಿತ ಜಮ್ಮು ಮತ್ತು ಕಾಶ್ಮೀರದಲ್ಲಿ ಪಾಕಿಸ್ತಾನಿ ಪಡೆಗಳು, ಪ್ರತಿಭಟನಾಕಾರರ ಮೇಲೆ ಗುಂಡು ಹಾರಿಸಿದಾಗ ಒಬ್ಬ ವ್ಯಕ್ತಿ ಸಾವನ್ನಪ್ಪಿ, ಹಲವರು ಗಾಯಗೊಂಡ ನಂತರ ಅಲ್ಲಿ ಉದ್ವಿಗ್ನತೆ ಹೆಚ್ಚಾಗಿದೆ. ಮೂಲಭೂತ ಹಕ್ಕುಗಳು, ಆರ್ಥಿಕ ಪರಿಹಾರ ಮತ್ತು ರಾಜಕೀಯ ಸ್ವಾತಂತ್ರ್ಯಗಳನ್ನು ಒತ್ತಾಯಿಸಿ ನಡೆದ ಪ್ರತಿಭಟನೆಗಳ ಮೇಲೆ ದಮನ ಕಾರ್ಯಾಚರಣೆ ನಡೆಯುತ್ತಿರುವ ಮಧ್ಯೆಯೇ ಈ ಘಟನೆ ನಡೆದಿದೆ. ಪಾಕಿಸ್ತಾನ ವಿರೋಧಿ ಪ್ರತಿಭಟನೆಗಳ ನಂತರ ಈ ಪ್ರದೇಶದಲ್ಲಿ ೭೦೦ ಕ್ಕೂ ಹೆಚ್ಚು ನಾಗರಿಕ ಹಕ್ಕುಗಳ ಕಾರ್ಯಕರ್ತರನ್ನು ಬಂಧಿಸಲಾಗಿದೆ ಎಂದು ಮಾಧ್ಯಮ ವರದಿಗಳು ತಿಳಿಸಿವೆ. ಏತನ್ಮಧ್ಯೆ, ವಿದೇಶದಲ್ಲಿರುವ ಕಾಶ್ಮೀರಿಗಳು ಪ್ರತಿಭಟನಾಕಾರರನ್ನು ಬೆಂಬಲಿಸಿ ನಿನ್ನೆ ಲಂಡನ್‌ನಲ್ಲಿ ಪ್ರತಿಭಟನಾ ಸಭೆ ನಡೆಸಿದರು.

<><><>

ಕ್ರಿಕೆಟ್‌ನಲ್ಲಿ, ಇಂಗ್ಲೆಂಡ್ ಅನ್ನು ೭ ವಿಕೆಟ್‌ಗಳಿಂದ ಸೋಲಿಸಿ ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕಿರೀಟವನ್ನು ಆಸ್ಟ್ರೇಲಿಯಾ ತಂಡ ಮುಡಿಗೇರಿಸಿಕೊಂಡಿದೆ. ಈ ಮೂಲಕ ದಾಖಲೆಯ ಏಳನೇ ಬಾರಿಗೆ ಆಸ್ಟ್ರೇಲಿಯಾ ಮಹಿಳಾ ತಂಡ ಟಿ-೨೦ ವಿಶ್ವಕಪ್ ಗೆದ್ದಿದೆ. ಇಂಗ್ಲೆಂಡ್ ನಿಗದಿಪಡಿಸಿದ ೧೫೧ ರನ್‌ಗಳ ಗುರಿಯನ್ನು ಬೆನ್ನಟ್ಟಿದ ಆಸ್ಟ್ರೇಲಿಯಾ ೧೭.೧ ಓವರ್‌ಗಳಲ್ಲಿ ಮೂರು ವಿಕೆಟ್‌ಗಳಿಗೆ

೧೫೩ ರನ್ ಗಳಿಸಿತು. ಬೆತ್ ಮೂನಿ ೬೪ ರನ್‌ಗಳೊಂದಿಗೆ ಆಸ್ಟ್ರೇಲಿಯಾ ಪರ ಅತಿ ಹೆಚ್ಚು ರನ್ ಗಳಿಸಿದರು. ಫೋಬೆ ಲಿಚ್‌ಫೀಲ್ಡ್ ೪೮ ರನ್ ಗಳಿಸಿದರು. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಇಂಗ್ಲೆಂಡ್, ನಿಗದಿತ ೨೦ ಓವರ್‌ಗಳಲ್ಲಿ ನಾಲ್ಕು ವಿಕೆಟ್‌ಗಳಿಗೆ ೧೫೦ ರನ್ ಗಳಿಸಿತು. ನಾಯಕಿ ನ್ಯಾಟ್ ಸಿವರ್-ಬ್ರಂಟ್ ಅಜೇಯ ೫೮ ರನ್ ಹಾಗೂ ಫ್ರೇಯಾ ಕೆಂಪ್ ೪೪ ರನ್ ಗಳಿಸಿದರು.

<><><><>

ಐದು ಬಾರಿಯ ವಿಶ್ವ ಚಾಂಪಿಯನ್ ಬ್ರೆಜಿಲ್ ತಂಡ, ನಿನ್ನೆ ರಾತ್ರಿ ನಡೆದ ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ ೧೬ರ ಸುತ್ತಿನಲ್ಲಿ ನಾರ್ವೆ ವಿರುದ್ಧ ೨-೧ ಅಂತರದ ಸೋಲನ್ನು ಅನುಭವಿಸಿದ ನಂತರ, ಬ್ರೆಜಿಲ್‌ನ ಅನುಭವಿ ಆಟಗಾರ ನೇಮರ್ ಜೂನಿಯರ್ ಅಂತಾರಾಷ್ಟ್ರೀಯ ಫುಟ್‌ಬಾಲ್‌ನಿಂದ ನಿವೃತ್ತಿ ಘೋಷಿಸಿದ್ದಾರೆ. ಅವರು ಬ್ರೆಜಿಲ್ ತಂಡದ ಪ್ರಮುಖ ಆಟಗಾರರಾಗಿದ್ದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>